Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

18.03.2025 19.35 hrs

<><*<><>*><>

ಮುಖ್ಯಾಂಶಗಳು

- ಮಹಾಕುಂಭ ಮೇಳದಲ್ಲಿ ವೈವಿಧ್ಯತೆಯಲ್ಲಿ ಏಕತೆಯ ಭವ್ಯ ಪ್ರದರ್ಶನ- ಪ್ರಧಾನಿ ನರೇಂದ್ರ ಮೋದಿ
- ರೈಲ್ವೆ ಇಲಾಖೆಯಲ್ಲಿ ಪ್ರಸ್ತುತ ೧ ಲಕ್ಷಕ್ಕೂ ಹೆಚ್ಚು ಉದ್ಯೋಗಗಳಿಗೆ ನೇಮಕಾತಿ ಚಾಲ್ತಿಯಲ್ಲಿ- ಸಚಿವ ಅಶ್ವಿನಿ ವೈಷ್ಣವ್
- ಮಣಿಪುರ ಸಾಮಾನ್ಯ ಸ್ಥಿತಿಗೆ ಮರಳುವಂತೆ ಮಾಡಲು ಕೇಂದ್ರ ಸರ್ಕಾರ ಬದ್ಧ- ಸಚಿವೆ ನಿರ್ಮಲಾ ಸೀತಾರಾಮನ್
- ಗಾಜಾ ಮೇಲೆ ಇಸ್ರೇಲ್ ವಾಯು ದಾಳಿ; ಮೃತರ ಸಂಖ್ಯೆ ೪೦೦ ಕ್ಕೆ ಏರಿಕೆ
- ಕಬಡ್ಡಿ ವಿಶ್ವಕಪ್; ಬಿ ಗುಂಪಿನ ಪುರುಷರ ಪಂದ್ಯದಲ್ಲಿಂದು ಭಾರತ- ಸ್ಕಾಟ್‌ಲ್ಯಾಂಡ್ ಮುಖಾಮುಖಿ

<><*<><>*><>

ಉತ್ತರಪ್ರದೇಶ ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭಮೇಳವು ಉದಯೋನ್ಮುಖ ಭಾರತದ ಚೈತನ್ಯವನ್ನು ಪ್ರತಿಬಿಂಬಿಸುತ್ತದೆ. ಈ ಮೂಲಕ ದೇಶದ ಶಕ್ತಿಯ ಬಗ್ಗೆ ಇಡೀ ಜಗತ್ತಿಗೆ ಅರಿವಾಗಿದೆ. ಮಹಾಕುಂಭದಲ್ಲಿ ಅನುಭವಕ್ಕೆ ಬಂದ ವೈವಿಧ್ಯತೆಯಲ್ಲಿ ಏಕತೆ ಭಾರತದ ವಿಶೇಷತೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ಲೋಕಸಭೆಯಲ್ಲಿಂದು ಮಹಾಕುಂಭಮೇಳ ಕುರಿತು ಮಾತನಾಡಿದ ಅವರು, ಇಡೀ ಜಗತ್ತು ಸವಾಲಿನ ಸಮಯವನ್ನು ಎದುರಿಸುತ್ತಿರುವಾಗ, ಈ ಏಕತೆಯ ಭವ್ಯ ಪ್ರದರ್ಶನವು ದೇಶದ ಅತೀ ದೊಡ್ಡ ಶಕ್ತಿಯಾಗಿದೆ. ವೈವಿಧ್ಯತೆಯಲ್ಲಿ ಏಕತೆಯ ಈ ವಿಶೇಷತೆಯನ್ನು ಶ್ರೀಮಂತಗೊಳಿಸುವುದನ್ನು ಮುಂದುವರಿಸುವ ಅಗತ್ಯವಿದೆ ಎಂದು ಹೇಳಿದರು. ಜಲಸಂರಕ್ಷಣೆ ಕುರಿತು ಮಾತನಾಡಿದ ಪ್ರಧಾನಿ, ಭಾರತದಲ್ಲಿ ಅನೇಕ ನದಿಗಳಿವೆ. ಅವುಗಳಲ್ಲಿ ಕೆಲವು ಅಳಿವಿನಂಚಿನಲ್ಲಿವೆ. ಮಹಾಕುಂಭ ಮೇಳದಿಂದ ಸ್ಫೂರ್ತಿ ಪಡೆದು, ನದಿ ಉತ್ಸವವನ್ನು ದೇಶಾದ್ಯಂತ ವಿಸ್ತರಿಸುವ ಅಗತ್ಯವಿದೆ. ಇದು ಹೊಸ ಪೀಳಿಗೆಗೆ ನೀರಿನ ಸಂರಕ್ಷಣೆಯ ಮಹತ್ವನ್ನು ಕಲಿಸುತ್ತದೆ ಎಂದು ಅಭಿಪ್ರಾಯಪಟ್ಟರು. ªÀÄಇದೇ ವೇಳೆ ಮಹಾಕುಂಭ ಮೇಳ ಯಶಸ್ಸಿಗೆ ಕೊಡುಗೆ ನೀಡಿದವರನ್ನು ಪ್ರಧಾನಿ ಶ್ಲಾಘಿಸಿದರು. ಕಳೆದ ವರ್ಷ ಅಯೋಧ್ಯೆಯ ರಾಮಮಂದಿರದಲ್ಲಿ ಬಾಲರಾಮನ ಪ್ರಾಣ ಪ್ರತಿಷ್ಠಾಪನೆಯನ್ನು ಉಲ್ಲೇಖಿಸಿದ ಅವರು, ಮುಂದಿನ ಸಾವಿರ ವರ್ಷಗಳ ಕಾಲ ದೇಶ ಹೇಗೆ ಸಿದ್ಧವಾಗುತ್ತಿದೆ ಎಂಬುದನ್ನು ಇದು ಪ್ರತಿಬಿಂಬಿಸುತ್ತದೆ. ಮಹಾಕುಂಭಮೇಳದ ಸಮಯದಲ್ಲಿ ಈ ಚಿಂತನೆಯನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಕಳೆದ ಹತ್ತು ವರ್ಷಗಳಲ್ಲಿ ಭಾರತೀಯ ರೈಲ್ವೆ ೫ ಲಕ್ಷ ಉದ್ಯೋಗಗಳನ್ನು ಸೃಷ್ಟಿಸಿವೆ. ಪ್ರಸ್ತುತ ೧ ಲಕ್ಷಕ್ಕೂ ಹೆಚ್ಚು ಉದ್ಯೋಗಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ರೈಲ್ವೆ ಸಚಿವಾಲಯದ ಕಾರ್ಯ ವೈಖರಿ ಕುರಿತ ಚರ್ಚೆಯಲ್ಲಿ ಉತ್ತರಿಸಿದ ಅವರು, ಭಾರತೀಯ ರೈಲ್ವೆ ಉತ್ತಮ ಆರ್ಥಿಕ ಸ್ಥಿತಿ ಹೊಂದಿದೆ. ಇದನ್ನು ಮತ್ತಷ್ಟು ಸುಧಾರಿಸಲು ಸರ್ಕಾರ ಕೆಲಸ ಮಾಡುತ್ತಿದೆ. ಭಾರತೀಯ ರೈಲ್ವೆಯಲ್ಲಿ ಅನೇಕ ತಾಂತ್ರಿಕ ಬದಲಾವಣೆಗಳನ್ನು ಮಾಡಲಾಗಿದೆ. ನಿರಂತರವಾಗಿ ರೈಲ್ವೆ ಸೇವೆಗಳು ಸುಧಾರಿಸುತ್ತಿವೆ. ಭಾರತವು ರೈಲ್ವೆಯ ದೊಡ್ಡ ರಫ್ತುದಾರ ರಾಷ್ಟ್ರವಾಗಿದೆ. ಆಸ್ಟ್ರೇಲಿಯಾಗೆ ಮೆಟ್ರೋ ಬೋಗಿಗಳನ್ನು, ಬ್ರಿಟನ್,

ಸೌದಿ ಅರೇಬಿಯಾ ಮತ್ತು ಫ್ರಾನ್ಸ್‌ಗೆ ರೈಲ್ವೆ ಬೋಗಿಗಳನ್ನು, ಹಾಗೂ ಮೆಕ್ಸಿಕೊ, ಸ್ಪೇನ್, ಜರ್ಮನಿ ಹಾಗೂ ಇಟಲಿಗೆ ಕಾರ್ಯಾಚರಣೆಯ ಉಪಕರಣಗಳನ್ನು ಭಾರತ ರಫ್ತು ಮಾಡುತ್ತಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು. ನಿರಂತರವಾಗಿ ರೈಲ್ವ ಮೂಲಸೌಕರ್ಯವನ್ನು ಸುಧಾರಿಸಲಾಗುತ್ತಿದೆ. ೩೪ ಸಾವಿರ ಕಿಲೋಮೀಟರ್ ರೈಲ್ವೆ ಹಳಿಗಳನ್ನು ನಿರ್ಮಿಸಲಾಗಿದೆ. ಅಲ್ಲದೆ, ೫೦ ಸಾವಿರ ಕಿಲೋಮೀಟರ್ ಹಳೆಯ ಹಳಿಗಳನ್ನು ಹೊಸ ಹಳಿಗಳೊಂದಿಗೆ ಬದಲಾಯಿಸಲಾಗಿದೆ. ಇದರಿಂದ ಸುರಕ್ಷತೆ ದೊಡ್ಡ ಮಟ್ಟದಲ್ಲಿ ಸುಧಾರಿಸಿದೆ ಎಂದು ಸಚಿವರು ಹೇಳಿದರು.

<><*<><>*><>

ಮಣಿಪುರದಲ್ಲಿ ಸಾಮಾನ್ಯ ಸ್ಥಿತಿ ಮತ್ತು ಸಮೃದ್ಧಿ ತರಲು ಕೇಂದ್ರ ಸರ್ಕಾರ ಬದ್ಧವಾಗಿದೆ. ಮಣಿಪುರದ ಬಗ್ಗೆ ಸರ್ಕಾರಕ್ಕೆ ಹೆಚ್ಚಿನ ಸಂವೇದನೆ ಮತ್ತು ಕಾಳಜಿ ಇದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಮಣಿಪುರ ವಿನಿಯೋಗ ಮಸೂದೆ-೨೦೨೫ರ ಚರ್ಚೆಯ ವೇಳೆ ಉತ್ತರಿಸಿದ ಸಚಿವರು, ಹೆಚ್ಚಿನ ರಾಜ್ಯಗಳು ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಸಹಾಯವಾಗುವ ನಿಟ್ಟಿನಲ್ಲಿ ಸಂಚಿತ ನಿಧಿಯನ್ನು ಹೊಂದಿವೆ. ಆದರೆ ಮಣಿಪುರ ಎಂದಿಗೂ ಸಂಚಿತ ನಿಧಿಯನ್ನು ಹೊಂದಿರಲಿಲ್ಲ. ಆದರೆ ಕೇಂದ್ರ ಸರ್ಕಾರ ಸಂಚಿತ ನಿಧಿಗಾಗಿ ಮಣಿಪುರಕ್ಕೆ ೫೦೦ ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದೆ ಎಂದು ತಿಳಿಸಿದರು. ಮಣಿಪುರದಲ್ಲಿನ ಹಿಂಸಾಚಾರವು ರಾಜ್ಯದ ಆರ್ಥಿಕತೆ ಚಟುವಟಿಕೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ಆದರೆ, ಇದು ಶೀಘ್ರ ಚೇತರಿಸಿಕೊಳ್ಳುವ ವಿಶ್ವಾಸವಿದೆ. ಅಲ್ಲಿನ ಪರಿಸ್ಥಿತಿಯನ್ನು ಸಾಮಾನ್ಯ ಸ್ಥಿತಿಗೆ ತರುವ ಪ್ರಯತ್ನಗಳ ಭಾಗವಾಗಿ ಕೇಂದ್ರ ಗೃಹ ಸಚಿವರು ಮತ್ತು ಕೇಂದ್ರ ಗೃಹ ಖಾತೆ ರಾಜ್ಯ ಸಚಿವರು ಮಣಿಪುರಕ್ಕೆ ಭೇಟಿ ನೀಡಿದ್ದಾರೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

<><*<><>*><>

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕನಿಷ್ಠ ಕೂಲಿಯನ್ನು ಹೆಚ್ಚಿಸಬೇಕು ಎಂದು ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ರಾಜ್ಯಸಭೆಯ ಶೂನ್ಯ ವೇಳೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಸರ್ಕಾರ ಈ ಯೋಜನೆಯನ್ನು ದುರ್ಬಲಗೊಳಿಸುತ್ತಿದೆ. ಈ ಯೋಜನೆಗೆ ಬಜೆಟ್‌ನಲ್ಲಿ ಮೀಸಲಿರಿಸಿದ್ದ ೮೬ ಸಾವಿರ ಕೋಟಿ ರೂಪಾಯಿ ಸರಿಯಾಗಿ ವಿನಿಯೋಗವಾಗಿಲ್ಲ ಎಂದು ಆರೋಪಿಸಿದರು. ಉದ್ಯೋಗ ಖಾತರಿ ಯೋಜನೆಯನ್ನು ವಿಸ್ತರಿಸಲು ಮತ್ತು ಕನಿಷ್ಠ ಕೂಲಿಯನ್ನು ಹೆಚ್ಚಿಸಲು ಹೆಚ್ಚಿನ ಅನುದಾನವನ್ನು ನೀಡಬೇಕೆಂದು ಸರ್ಕಾರವನ್ನು ಸೋನಿಯಾ ಗಾಂಧಿ ಒತ್ತಾಯಿಸಿದರು.

<><*<><>*><>

ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಬಾಕಿ ಇದ್ದ ೨ ಲಕ್ಷ ೨೬ ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಮೊತ್ತವನ್ನು ವಸೂಲಿ ಮಾಡಿವೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ೨೦೨೨-೨೦೨೩ ನೇ ಸಾಲಿನಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಬಾಕಿ ಇದ್ದ ೩೫ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೊತ್ತವನ್ನು ವಸೂಲಿ ಮಾಡಿವೆ. ಬಾಕಿ ಪಾವತಿಸದೇ ಇರುವುದರಿಂದ ಉಂಟಾಗುವ ಪರಿಣಾಮಗಳಿಂದ ಸುಸ್ತಿದಾರರು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಸಾಲ ವಸೂಲಾತಿ ನಿರಂತರ ಪ್ರಕ್ರಿಯೆಯಾಗಿದೆ ಎಂದು ಅವರು ಹೇಳಿದರು.

<><*<><>*><>

ಇಟಲಿಯ ಟುರಿನ್‌ನಲ್ಲಿ ಇತ್ತೀಚಿಗೆ ನಡೆದ ವಿಶ್ವ ಚಳಿಗಾಲದ ವಿಶೇಷ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಭಾರತೀಯ ಕ್ರೀಡಾಪಟುಗಳು ಇಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದರು. ಈ ವೇಳೆ ಕ್ರೀಡಾಪಟುಗಳನ್ನು ಪ್ರಧಾನಿ ಅಭಿನಂದಿಸಿದರು. ವಿಶೇಷ ಒಲಿಂಪಿಕ್ಸ್‌ನಲ್ಲಿ ೩೩ ಪದಕಗಳನ್ನು ಗೆದ್ದು, ರಾಷ್ಟ್ರಕ್ಕೆ ಕೀರ್ತಿ ತಂದ ಭಾರತೀಯ ಕ್ರೀಡಾಪಟುಗಳ ಬಗ್ಗೆ ಹೆಮ್ಮೆಯಿದೆ.

ಅವರ ಸಾಧನೆ ಅಭಿನಂದನೀಯ ಎಂದು ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<><*<><>*><>

ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ್ ಜೋಡಿಸಲು ಕೇಂದ್ರ ಚುನಾವಣಾ ಆಯೋಗ ಮುಂದಾಗಿದೆ. ನವದೆಹಲಿಯ ನಿರ್ವಚನ್ ಸದನ್‌ನಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಇಂದು ನಡೆದ ಸಭೆಯಲ್ಲಿ ಈ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಗೃಹ ಸಚಿವಾಲಯ, ಶಾಸಕಾಂಗ ಇಲಾಖೆಯ ಕಾರ್ಯದರ್ಶಿಗಳು ಮತ್ತು ಭಾರತೀಯ ವಿಶಿಷ್ಟ ಗುರುತಿನ ಚೀಟಿ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಭಾಗವಹಿಸಿದ್ದರು.

<><*<><>*><>

ರಕ್ಷಣಾ ಗುಪ್ತಚರ ಸಂಸ್ಥೆಯ ಮಹಾನಿರ್ದೇಶಕರಾದ ಲೆಫ್ಟಿನೆಂಟ್ ಜನರಲ್ ಡಿ.ಎಸ್.ರಾಣಾ, ನಾಳೆಯಿಂದ ಇದೇ ೨೧ರವರೆಗೆ ಆಸ್ಟ್ರೇಲಿಯಾಕ್ಕೆ ಭೇಟಿ ನೀಡಲಿದ್ದಾರೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ರಕ್ಷಣಾ ಗುಪ್ತಚರ ಸಹಕಾರವನ್ನು ಬಲಪಡಿಸುವ ಹಾಗೂ ಕಾರ್ಯತಂತ್ರವನ್ನು ಹೆಚ್ಚಿಸುವ ಗುರಿಯನ್ನು ಈ ಭೇಟಿ ಹೊಂದಿದೆ. ಭೇಟಿಯ ಸಂದರ್ಭದಲ್ಲಿ ಅವರು ಆಸ್ಟ್ರೇಲಿಯಾದ ಹಿರಿಯ ರಕ್ಷಣಾ ಅಧಿಕಾರಿಗಳೊಂದಿಗೆ ಗುಪ್ತಚರ ಮಾಹಿತಿ ಹಂಚಿಕೆ ಕಾರ್ಯವಿಧಾನಗಳು, ಪ್ರಾದೇಶಿಕ ಭದ್ರತಾ ಸಹಕಾರ ಮತ್ತು ಇಂಡೊ-ಪೆಸಿಫಿಕ್ ಪ್ರದೇಶದಲ್ಲಿ ಹೆಚ್ಚಿನ ಸಹಯೋಗ ಕುರಿತು ಚರ್ಚೆ ನಡೆಸಲಿದ್ದಾರೆ. ಈ ಭೇಟಿಯು, ಉಭಯ ದೇಶಗಳ ನಡುವಿನ ಗುಪ್ತಚರ ಮತ್ತು ಭದ್ರತಾ ಸಹಕಾರವನ್ನು ಬಲಗೊಳಿಸಲಿದೆ. ಶಾಂತಿ, ಸ್ಥಿರತೆ ಮತ್ತು ಭದ್ರತೆಯನ್ನು ಕಾಪಾಡಿಕೊಳ್ಳಲು ಎರಡೂ ರಾಷ್ಟ್ರಗಳ ಬದ್ಧತೆಯನ್ನು ಬಲಪಡಿಸುತ್ತದೆ.

<><*<><>*><>

ಗಾಜಾದ ಮೇಲೆ ನಿನ್ನೆ ರಾತ್ರಿಯಿಡೀ ಇಸ್ರೇಲ್ ನಡೆಸಿದ ವಾಯು ದಾಳಿಯಲ್ಲಿ ೪೦೦ ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಹಮಾಸ್ ನಿರ್ವಹಿಸುತ್ತಿರುವ ಪ್ಯಾಲಿಸ್ತೇನ್ ಆರೋಗ್ಯ ಇಲಾಖೆಯ ಅಧಿಕಾರಿಗಳ ಪ್ರಕಾರ, ದಾಳಿಯಲ್ಲಿ ೫೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಕದನ ವಿರಾಮವನ್ನು ವಿಸ್ತರಿಸುವ ಮಾತುಕತೆ ವಿಫಲವಾದ ನಂತರ ವ್ಯಾಪಕ ದಾಳಿಯನ್ನು ನಡೆಸುತ್ತಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ಜನವರಿ ೧೯ ರಂದು ಇಸ್ರೇಲ್ ಮತ್ತು ಹಮಾಸ್ ನಡುವೆ ಕದನ ವಿರಾಮ ಆರಂಭವಾದ ನಂತರ ನಡೆದ ಅತಿ ದೊಡ್ಡ ದಾಳಿ ಇದಾಗಿದೆ. ಇಸ್ರೇಲ್‌ನ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಲು ಹಮಾಸ್ ಪದೇ ಪದೆ ನಿರಾಕರಿಸುತ್ತಿದೆ ಮತ್ತು ಕದನ ವಿರಾಮವನ್ನು ವಿಸ್ತರಿಸುವ ಪ್ರಸ್ತಾಪವನ್ನು ತಿರಸ್ಕರಿಸುತ್ತಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಕಾರ್ಯಾಲಯ ಆರೋಪಿಸಿದೆ.

<><*<><>*><>

ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ನಡೆಯುತ್ತಿರುವ ೨೦೨೫ ರ ಕಬಡ್ಡಿ ವಿಶ್ವಕಪ್‌ನ 'ಬಿ' ಗುಂಪಿನ ಪಂದ್ಯದಲ್ಲಿ ಭಾರತದ ಪುರುಷರ ತಂಡ, ಸ್ಕಾಟ್ಲೆಂಡ್‌ನೊಂದಿಗೆ ಸೆಣಸಾಟ ನಡೆಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦:೩೦ಕ್ಕೆ ಆರಂಭವಾಗಲಿದೆ.

<><*<><>*><>

ನವದೆಹಲಿಯ ಭಾರತ ಮಂಟಪಂನಲ್ಲಿಂದು ಕ್ಷಯರೋಗ ಮುಕ್ತಗೊಳಿಸುವ ನಿಟ್ಟಿನಲ್ಲಿ ಭಾರತ ನಾವೀನ್ಯತೆ ಶೃಂಗಸಭೆಯನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಉದ್ಘಾಟಿಸಿದರು. ೨೦೨೫ರ ವೇಳೆಗೆ ಕ್ಷಯರೋಗ ನಿರ್ಮೂಲನೆ ನಿಟ್ಟಿನಲ್ಲಿ ಭಾರತದ ಪ್ರಗತಿಯನ್ನು ವೇಗಗೊಳಿಸುವ ಈ ಶೃಂಗಸಭೆ ಹೊಂದಿದೆ. ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ಸಚಿವೆ ಅನುಪ್ರಿಯಾ ಪಟೇಲ್, ೨೦೧೫ ಕ್ಕೆ ಹೋಲಿಸಿದರೆ, ೨೦೨೩ ರಲ್ಲಿ ಕ್ಷಯರೋಗ

ಸಾವಿನ ಪ್ರಕರಣಗಳು ತಗ್ಗಿವೆ. ೨೦೨೩ ರಲ್ಲಿ ೨೫.೫ ಲಕ್ಷ ಕ್ಷಯರೋಗ ಪ್ರಕರಣಗಳು ಪತ್ತೆಯಾಗಿದ್ದು, ೨೦೨೪ರಲ್ಲಿ ೨೬.೦೭ ಲಕ್ಷ ಕ್ಷಯರೋಗ ಪ್ರಕರಣಗಳು ಪತ್ತೆಯಾಗಿವೆ ಎಂದು ತಿಳಿಸಿದರು.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೧ ಸಾವಿರದ ೧೩೧ ಅಂಕಗಳು ಏರಿಕೆಯಗಿದ್ದು, ದಿನದ ಅಂತ್ಯಕ್ಕೆ ೭೫ ಸಾವಿರದ ೩೦೧ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೩೨೫ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೮೩೪ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೬ ರೂಪಾಯಿ ೫೫ ಪೈಸೆಯಷ್ಟಾಗಿದೆ.

<><*<><>*><>

ಒಂಬತ್ತು ತಿಂಗಳಿಗೂ ಹೆಚ್ಚು ಕಾಲ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿಕೊಂಡಿದ್ದ ಗಗನಯಾತ್ರಿಗಳಾದ ಬುಚ್ ವಿಲ್ಮೋರ್ ಮತ್ತು ಸುನೀತಾ ವಿಲಿಯಮ್ಸ್ ಇಂದು ತಡರಾತ್ರಿ ಭೂಮಿಗೆ ಮರಳಲಿದ್ದಾರೆ.  ನಾಳೆ ಬೆಳಗಿನ ಜಾವ ೩:೨೭ ಸಮಯಕ್ಕೆ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯು ಭೂಮಿಯನ್ನು ಸ್ಪರ್ಶಿಸಲಿವೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಕ್ರೂ-೯ ಮಿಷನ್ ಮರಳಲು ಪರಿಸ್ಥಿತಿಗಳು ಅನುಕೂಲಕರವಾಗಿವೆ ಎಂದು ಬಾಹ್ಯಾಕಾಶ ಸಂಸ್ಥೆ ತಿಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>